# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್ ರಸ್ತೆ, ತುಮಕೂರು -572103

ಸಂಖ್ಯೆ:ತುವಿ:ಶೈವಿ:PG-ADM:2024-25/12409 ದಿನಾಂಕ:14.10.2024

## ಸ್ನಾತಕೋತ್ತರ ಪ್ರವೇಶಾತಿ ಮರುಅಧಿಸೂಚನೆ 2024-25

**ವಿಷಯ:** 2024-25ನೇ ಶೈಕ್ಷಣಿಕ ಸಾಲಿಗೆ ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ವಿಭಾಗಗಳು, ಸ್ನಾತಕೋತ್ತರ ಕೇಂದ್ರಗಳು ಘಟಕ ಮತ್ತು ಸಂಯೋಜಿತ ಕಾಲೇಜುಗಳಲ್ಲಿನ ಸ್ನಾತಕೋತ್ತರ ಕೋರ್ಸುಗಳ ಉಳಿಕೆ ಸೀಟುಗಳ ಪ್ರವೇಶಾತಿಗೆ ಅರ್ಜಿಯನ್ನು ಆಹ್ವಾನಿಸುವ ಕುರಿತು.

**ಉಲ್ಲೇಖ:** 1. ಅಧಿಸೂಚನೆ ಪತ್ರ ಸಂಖ್ಯೆ:ತುವಿ:ಶೈವಿ:PG-ADM:2024-25:2136 ದಿನಾಂಕ:21.09.2024

2. ಪರಿಷ್ಕೃತ ಅಧಿಸೂಚನೆ ಪತ್ರ ಸಂಖ್ಯೆ:ತುವಿ:ಶೈವಿ:PG-ADM:2024-25:2268 ದಿನಾಂಕ:01.10.2024

3. ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ:14.10.2024

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2024-25ನೇ ಶೈಕ್ಷಣಿಕ ಸಾಲಿಗೆ ತುಮಕೂರು ವಿಶ್ವವಿದ್ಯಾನಿಲಯದ, ಕರ್ನಾಟಕ ವ್ಯಾಪ್ತಿಯಲ್ಲಿನ ಹಾಗೂ ಅನ್ಯ ರಾಜ್ಯಗಳ ವಿಶ್ವವಿದ್ಯಾನಿಲಯಗಳಿಂದ ಸ್ನಾತಕ ಪದವಿಯಲ್ಲಿ ತೇರ್ಗಡೆ ಹೊಂದಿರುವ ಅರ್ಹ ಅಭ್ಯರ್ಥಿಗಳಿಂದ ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ವಿಭಾಗಗಳು, ಸ್ನಾತಕೋತ್ತರ ಕೇಂದ್ರಗಳು, ಘಟಕ ಮತ್ತು ಸಂಯೋಜಿತ ಕಾಲೇಜುಗಳಲ್ಲಿನ ಕೋರ್ಸ್‌ಗಳ ಪ್ರವೇಶಾತಿಗೆ ಉಲ್ಲೇಖ(1) ಮತ್ತು (02)ರಂತೆ **UUCMS** ಮೂಲಕ ಅರ್ಜಿಯನ್ನು ಆಹ್ವಾನಿಸಲಾಗಿತ್ತು. ಈ ಸಂಬಂಧ ದಿನಾಂಕ:09 ಮತ್ತು 10, ಅಕ್ಟೋಬರ್ 2024 ರಂದು ಕೌನ್ಸೆಲಿಂಗ್ ಮುಖಾಂತರ ಪ್ರವೇಶಾತಿ ಪೂರ್ಣಗೊಂಡಿರುತ್ತದೆ. ಮುಂದುವರೆದು ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಹಾಗೂ ಮಾನ್ಯ ಕುಲಪತಿಯವರ ಅನುಮೋದನೆಯ ಮೇರೆಗೆ ಸ್ನಾತಕೋತ್ತರ ವಿಭಾಗಗಳಲ್ಲಿ ಖಾಲಿ ಉಳಿದಿರುವ ಸೀಟುಗಳಿಗೆ ಅರ್ಜಿಯನ್ನು ಆಹ್ವಾನಿಸಲಾಗಿದೆ. ವಿದ್ಯಾರ್ಥಿಗಳು ಸಂಬಂಧಪಟ್ಟ ವಿಭಾಗವನ್ನು ಸಂಪರ್ಕಿಸಿ ತಮ್ಮ ಅರ್ಜಿಗಳನ್ನು ಭರ್ತಿಮಾಡಿ **ದಿನಾಂಕ:16.10.2024 ರೊಳಗಾಗಿ ವಿಭಾಗಗಳಿಗೆ ಸಲ್ಲಿಸುವುದು. ದಿನಾಂಕ:18.10.2024 ರಂದು ವಿಭಾಗಗಳ ಮಟ್ಟದಲ್ಲಿ ಖಾಲಿ ಉಳಿದಿರುವ ಸೀಟುಗಳಿಗೆ ನೇರವಾಗಿ ಪ್ರವೇಶಾತಿ ಪಡೆಯುವುದು.**

**ವಿಶೇಷ ಸೂಚನೆ: ಈ ಹಿಂದೆ ಅರ್ಜಿ ಸಲ್ಲಿಸಿ ಕೌನ್ಸಲಿಂಗ್‌ಗೆ ಹಾಜರಾಗದ ವಿದ್ಯಾರ್ಥಿಗಳು ಪ್ರವೇಶಾತಿಗೆ ಹಾಜರಾದಲ್ಲಿ ಅಂತಹ ಅರ್ಜಿಗಳನ್ನು ಪರಿಗಣಿಸಿ ವಿದ್ಯಾರ್ಥಿಗಳಿಗೆ ಪ್ರವೇಶಾತಿ ನೀಡಬಹುದಾಗಿದೆ.**

**ಉಲ್ಲೇಖ (01) ರ ಅಧಿಸೂಚನೆಯಲ್ಲಿನ ನಿಬಂಧನೆಗಳು ಹಾಗೂ ಸೂಚನೆಗಳಲ್ಲಿ ಯಾವುದೇ ಬದಲಾವಣೆಯಿರುವುದಿಲ್ಲ**

ಆದೇಶದ ಮೇರೆಗೆ

14/10/2024

ಉಪಕುಲಸಚಿವರು

ಉಪಕುಲಸಚಿವರು
ಶೈಕ್ಷಣಿಕ ವಿಭಾಗ
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಪ್ರತಿಗಳು:

1. ಕುಲಸಚಿವರು (ಪರೀಕ್ಷಾಂಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಪರಿಷತ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪು.ತಿ.ನೋ